# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1240 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.12.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಹೈನುಗಾರರ ಅಹವಾಲು, ಸಮಸ್ಯೆ ಬೇಡಿಕೆಗಳಿಗೆ ತ್ವರಿತವಾಗಿ ಸ್ಪಂದಿಸಲು ಅನುವಾಗುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿಯೂ ಪ್ರತ್ಯೇಕ ಹಾಲು ಒಕ್ಕೂಟ ರಚಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಬಂದಿದ್ದಲ್ಲಿ, ರಾಜ್ಯದಲ್ಲಿನ ಒಟ್ಟಾರೆ ಹಾಲು ಉತ್ಪಾದನೆ ಹೆಚ್ಚಿಸಲು ಹಾಗೂ ಹೈನುಗಾರರನ್ನು ಇನ್ನಷ್ಟು ಸ್ವಾವಲಂಬಿ ಹಾಗೂ ಸಶಕ್ತರನ್ನಾಗಿಸಲು ಪ್ರತೀ ಜಿಲ್ಲೆಯಲ್ಲಿಯೂ ಪ್ರತ್ಯೇಕ ಹಾಲು ಒಕ್ಕೂಟ ರಚಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಪ್ರತಿ ಜಿಲ್ಲೆಯಲ್ಲಿಯೂ ಪ್ರತ್ಯೇಕ ಹಾಲು ಒಕ್ಕೂಟ ರಚಿಸುವ ಕುರಿತು ಆಯಾ ಜಿಲ್ಲಾ ಹಾಲು ಒಕ್ಕೂಟಗಳಿಂದ ಬೇಡಿಕೆ ಬಂದಲ್ಲಿ ಈ ಬಗ್ಗೆ ಎನ್.ಡಿ.ಡಿ.ಬಿ. ಯಿಂದ ಕಾರ್ಯ ಸಾಧ್ಯತಾ ವರದಿ ಮತ್ತು ಸಹಮತ ಪಡೆದು ನಂತರ ಒಕ್ಕೂಟದ ಆಡಳಿತ ಮಂಡಳಿ ಸಭೆಯಲ್ಲಿ ಚರ್ಚಿಸಿ, ಆಸ್ತಿ-ಜವಾಬ್ದಾರಿ ವಿಭಜನೆ ಸಮಿತಿಗಳನ್ನು ರಚಿಸಲಾಗುತ್ತದೆ.<br><br>ವಿಭಜನಾ ಸಮಿತಿಗಳು ಈ ಬಗ್ಗೆ ನೀಡುವ ಸಮಿತಿ ವರದಿ ಹಾಗೂ ಕಾರ್ಯ ಸಾಧ್ಯತೆ ವರದಿಯನ್ನು ಒಕ್ಕೂಟದ ಆಡಳಿತ ಮಂಡಳಿ ಸಭೆಯಲ್ಲಿ ಹಾಗೂ ವಾರ್ಷಿಕ ಮಹಾ ಸಭೆಯಲ್ಲಿ ಮಂಡಿಸಿ, ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪನೆ ಸಂಬಂಧ ಸಾಧಕ-ಬಾಧಕಗಳ ಬಗ್ಗೆ ಚರ್ಚಿಸಿ, ತೀರ್ಮಾನ ಕೈಗೊಳ್ಳಲಾಗುತ್ತದೆ.<br><br>ನಂತರ ಸದರಿ ವರದಿಗೆ ತಾತ್ವಿಕ ಅನುಮೋದನೆ ನೀಡಿ, ಸಕ್ಷಮ ಪ್ರಾಧಿಕಾರವಾದ ಕಾರ್ಯವ್ಯಾಪ್ತಿಯ ನಿಬಂಧಕರು ನಿಯಮಾನುಸಾರ ಒಕ್ಕೂಟವನ್ನು ವಿಭಜಿಸಿ, ಪ್ರತ್ಯೇಕ ಹಾಲು ಒಕ್ಕೂಟ ರಚನೆಗೆ ಹೊಸದಾಗಿ ನೋಂದಣಿ ಮಾಡಿಕೊಡಲಾಗುತ್ತದೆ. |

| | | |
|---|---|---|
| | | ಪ್ರಸ್ತುತ ರಾಜ್ಯದಲ್ಲಿನ ಎಲ್ಲಾ 31 ಜಿಲ್ಲೆಗಳನ್ನೊಳಗೊಂಡಂತೆ 16 ಜಿಲ ಹಾಲು ಒಕ್ಕೂಟಗಳು ಕರ್ನಾಟಕ ಹಾಲು ಮಹಾಮಂಡಳದ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿವೆ.<br><br>8 ಜಿಲ್ಲೆಗಳಲ್ಲಿ ಮಾತ್ರ ಪ್ರತ್ಯೇಕ ಹಾಲು ಒಕ್ಕೂಟಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.<br><br>ಇನ್ನುಳಿದ 8 ಒಕ್ಕೂಟಗಳಲ್ಲಿ 23 ಜಿಲ್ಲೆಗಳು ಸೇರ್ಪಡೆಗೊಂಡು ಕಾರ್ಯ ನಿರ್ವಹಿಸುತ್ತಿರುತ್ತವೆ.<br><br>ಆ 8 ಒಕ್ಕೂಟಗಳ ಪೈಕಿ 3 ಒಕ್ಕೂಟಗಳಿಂದ ಮಾತ್ರ ಪ್ರತ್ಯೇಕ ಹಾಲು ಒಕ್ಕೂಟ ರಚಿಸಲು ಪ್ರಸ್ತಾವನೆಯು ಸಹಕಾರ ಇಲಾಖೆಯಲ್ಲಿ ಸ್ವೀಕೃತವಾಗಿದ್ದು, ವಿವರ ಕೆಳಕಂಡಂತಿದೆ:-<br><br>1) ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಶಿವಮೊಗ್ಗ: (ಶಿವಮೊಗ್ಗ ಜಿಲ್ಲೆಗೆ ಪ್ರತ್ಯೇಕ ಒಕ್ಕೂಟ)<br><br>2) ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಹಾಸನ: (ಚಿಕ್ಕಮಗಳೂರು ಜಿಲ್ಲೆಗೆ ಪ್ರತ್ಯೇಕ ಒಕ್ಕೂಟ)<br><br>3) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಬಾಗಲಕೋಟೆ. (ಬಾಗಲಕೋಟೆ ಜಿಲ್ಲೆಗೆ ಪ್ರತ್ಯೇಕ ಒಕ್ಕೂಟ)<br><br>ಪ್ರತ್ಯೇಕ ಹಾಲು ಒಕ್ಕೂಟಗಳ ರಚನೆ ಕುರಿತಂತೆ ಎನ್.ಡಿ.ಡಿ.ಬಿ. ರವರಿಂದ ಸಾಧ್ಯತಾ ವರದಿಯನ್ನು ನಿರೀಕ್ಷಿಸಲಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ. |
| ಇ) | ಹೈನುಗಾರರಿಗೆ ಗೋವುಗಳ ಖರೀದಿ ಗೋ ಸಾಗಾಣಿಕೆಗೆ ಅಗತ್ಯ ಮೂಲಸೌಕರ್ಯ ಮತ್ತಿತರ ಅಗತ್ಯ ವ್ಯವಸ್ಥೆಗಳನ್ನು ಮಾಡಿಕೊಳ್ಳಲು ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕಾರ್ಯಕ್ರಮಗಳೇನು ಹಾಗೂ ರಾಜ್ಯದ ಹೈನುಗಾರರಿಗೆ ಸರ್ಕಾರ ಪ್ರಸ್ತುತ ನೀಡುತ್ತಿರುವ ಸೌಲಭ್ಯಗಳು ಯಾವುವು: | ರಾಜ್ಯದ ಹೈನುಗಾರರಿಗೆ ಸರ್ಕಾರ ಪ್ರಸ್ತುತ ನೀಡುತ್ತಿರುವ ಸೌಲಭ್ಯಗಳು ಈ ಕೆಳಕಂಡಂತಿವೆ:-<br><br>➢ ಪ್ರತೀ ಲೀಟರ್ ಗುಣಮಟ್ಟದ ಹಾಲಿಗೆ ರೂ:5/- ಪ್ರೋತ್ಸಾಹ ಧನ.<br>➢ ಜಾನುವಾರುಗಳ ಆಕಸ್ಮಿಕ ಸಾವಿಗೆ ಪರಿಹಾರಧನ ವಿತರಣೆ.<br>➢ ಕೃತಕ ಗರ್ಭಧಾರಣೆ ಮತ್ತು ಕೃತಕ ಗರ್ಭಧಾರಣೆಯಲ್ಲಿ |

| | | |
|---|---|---|
| | | ಲಿಂಗನಿರ್ಧಾರಿತ ವೀರ್ಯ ನಳಿಕೆಗಳ ಬಳಕೆ.<br>➢ ಜಾನುವಾರು ರೋಗಗಳಿಗೆ ಉಚಿತ ಲಸಿಕಾ ಕಾರ್ಯಕ್ರಮ.<br>➢ ಮೇವು ಕತ್ತರಿಸುವ ಯಂತ್ರಗಳ ವಿತರಣೆ.<br>➢ ರಬ್ಬರ್ ಮ್ಯಾಟ್‌ಗಳ ವಿತರಣೆ.<br>➢ ಮೇವಿನ ಬೀಜದ ಮಿನಿಕಿಟ್ ವಿತರಣೆ.<br>➢ ಜಾನುವಾರು ವಿಮಾ ಯೋಜನೆ.<br>➢ ಪಶುಸಂಗೋಪನೆಗೆ ಸಂಬಂಧಿಸಿದ ವಿವಿಧ ವಿಷಯಗಳಿಗೆ ಉಚಿತ ತರಬೇತಿ. |
| ಈ) | ಕಳೆದ 2 ವರ್ಷಗಳಲ್ಲಿ ರಾಜ್ಯದ ಹೈನುಗಾರರಿಗೆ ಸಂಬಂಧಿಸಿದ ಯೋಜನೆ ಮತ್ತು ಸೌಲಭ್ಯಗಳಿಗೆ ಸರ್ಕಾರ ವಿನಿಯೋಗಿಸಿರುವ ಅನುದಾನ ಎಷ್ಟು: | ಕಳೆದ 2 ವರ್ಷಗಳಲ್ಲಿ ರಾಜ್ಯದ ಹೈನುಗಾರರಿಗೆ ಸಂಬಂಧಿಸಿದ ಯೋಜನೆ ಮತ್ತು ಸೌಲಭ್ಯಗಳಿಗೆ ಸರ್ಕಾರ ವಿನಿಯೋಗಿಸಿರುವ ಅನುದಾನಗಳ ವಿವರವನ್ನು **ಅನುಬಂಧದಲ್ಲಿ** ಒದಗಿಸಿದೆ. |
| ಉ) | ಯಾವ ಕಾಲಮಿತಿಯೊಳಗೆ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿಯೂ ಪ್ರತ್ಯೇಕ ಹಾಲು ಒಕ್ಕೂಟ ರಚಿಸಿ, ಕಾರ್ಯಾಚರಣೆಗೊಳಿಸಲಾಗುವುದು? | ಪ್ರತಿ ಜಿಲ್ಲೆಯಲ್ಲಿಯೂ ಪ್ರತ್ಯೇಕ ಹಾಲು ಒಕ್ಕೂಟವನ್ನು ರಚಿಸುವ ಕುರಿತು ಆಯಾ ಜಿಲ್ಲಾ ಹಾಲು ಒಕ್ಕೂಟಗಳಿಂದ ಬೇಡಿಕೆ/ ಪ್ರಸ್ತಾವನೆ ಬಂದಲ್ಲಿ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಪಸಂಮೀ 99 ಕಹಾಮ 2025**

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ:1240 ಕ್ಕೆ**

**ಅನುಬಂಧ**

**ಕಳೆದ 2 ವರ್ಷಗಳಲ್ಲಿ ರಾಜ್ಯದ ಹೈನುಗಾರರಿಗೆ ಸಂಬಂಧಿಸಿದ ಯೋಜನೆ ಮತ್ತು ಸೌಲಭ್ಯಗಳಿಗೆ ಸರ್ಕಾರ ವಿನಿಯೋಗಿಸಿರುವ ಅನುದಾನ ವಿವರ**

| ಕ್ರ. ಸಂ | ಯೋಜನೆ | ವಿನಿಯೋಗಿಸಿದ ಅನುದಾನ (ರೂ. ಕೋಟಿಗಳಲ್ಲಿ) | |
|---|---|---|---|
| | | 2023-24 | 2024-25 |
| 1 | ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ | 1161.80 | 1692.35 |
| 2 | ಜಾನುವಾರು ವಿಮಾ ಯೋಜನೆ | 3.33 | 2.08 |
| 3 | ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮದಡಿ ಉಳಿಕೆ ಅನುದಾನದಲ್ಲಿ ಹೈನು ಘಟಕ ವಿತರಣೆ | 6.81 | - |
| 4 | ಮೇವು ಕತ್ತರಿಸುವ ಯಂತ್ರ | 3.00 | 2.00 |
| 5 | ರಾಸುಗಳು ಆಕಸ್ಮಿಕ ಮರಣ ಹೊಂದಿದಾಗ ರಾಸುಗಳ ಮಾಲಿಕರಿಗೆ ಪರಿಹಾರಧನ ವಿತರಣೆ | 12.88 | 14.99 |
| 6 | ಮೇವಿನ ಬೀಜದ ಮಿನಿಕಿಟ್ ವಿತರಣೆ | 47.81 | 8.94 |